<u>ದಿನಾಂಕ **17.01.2026** ರಂದು ಪಿ.ಡಬ್ಲೂ-**1** ರವರನ್ನು ಪುನಃ ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.</u>

<u>ಪಾಟೀ ಸವಾಲುಃ ಪ್ರತಿವಾದಿಯರ ಪರ ಶ್ರೀ.ಎ ಪಿ ಕೆ ವಕೀಲರಿಂದಃ-</u>

1. ನಾನು ಪ್ರಸ್ತುತ ದಾವೆಯನ್ನು ಎರಡು ಪ್ಲಾಟ್‌ಗಳ ಕುರಿತು ಸಲ್ಲಿಸಿರುತ್ತೇನೆ. ಸದರಿ ಪ್ಲಾಟ್‌ಗಳ ನಂಬರ್, ಕ್ಷೇತ್ರ ಮತ್ತು ಅಳತೆಯ ಕುರಿತು ದಾವೆಯಲ್ಲಿ ಬರೆಸಿರುತ್ತೀರಾ? ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ವಾದ ಪತ್ರದಲ್ಲಿ ಬರೆದಿರುವ ಒಳಾಂಶಗಳ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ, ನನ್ನ ಗಂಡನಿಗೆ ಮಾಹಿತಿ ಇರುತ್ತದೆ. ನನ್ನ ಗಂಡನ ಹೆಸರು ಸಲಬಯ್ಯ ಮಠಪತಿ ಇರುತ್ತದೆ. ವಾದ ಪತ್ರದ ಜೊತೆಗೆ ಸಲ್ಲಿಸಿರುವ ದಾಖಲೆ ಅಥವಾ ದಸ್ತಾವೇಜುಗಳ ಬಗ್ಗೆ ನನಗೆ ಮಾಹಿತಿ ಇಲ್ಲ. 1ನೇ ಪ್ರತಿವಾದಿಯು ವೃತ್ತಿಯಲ್ಲಿ ವಕೀಲರಾಗಿರುತ್ತಾರೆ ಎಂದರೆ ಸರಿ.

2. ನಾನು ಕಡಪಟ್ಟಿ ಗ್ರಾಮದ ನಿವಾಸಿಯಾಗಿರುತ್ತೇನೆ ಎಂದರೆ ಸರಿ. 1ನೇ ಪ್ರತಿವಾದಿಯ ಜಮೀನು ಕಡಪಟ್ಟಿ ಗ್ರಾಮದ ವ್ಯಾಪ್ತಿಯಲ್ಲಿರುತ್ತದೆ ಎಂದರೆ ಸರಿ. 1ನೇ ಪ್ರತಿವಾದಿಯ ಸ್ವತ್ತನ್ನು ಎತ್ತಿಹಾಕಬೇಕೆಂಬ ಉದ್ದೇಶದಿಂದ ನಾನು ಸುಳ್ಳು ದಾವೆ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. 2ನೇ ಪ್ರತಿವಾದಿಯು 1ನೇ ಪ್ರತಿವಾದಿಯ ಮಗನಾಗಿರುವುದರಿಂದ, ಅವರನ್ನು ಸಹ ಈ ದಾವೆಯಲ್ಲಿ ಸೇರಿಸಿರುತ್ತೇನೆ. ಪ್ರಸ್ತುತ ದಾವೆ ಸಲ್ಲಿಸುವ ಪೂರ್ವದಲ್ಲಿ ನಾನು ಪ್ರತಿವಾದಿಯರಿಗೆ ನೋಟೀಸು ನೀಡಿರುವುದಿಲ್ಲ. ಸಾಕ್ಷಿಯು ಮುಂದುವರೆದು ಮೌಖಿಕವಾಗಿ ಹೇಳಿರುತ್ತೇನೆ ಎಂದು ನುಡಿಯುತ್ತಾರೆ. ಪ್ರತಿವಾದಿಯರು ದಾವಾ ಸ್ವತ್ತಿನ ಕುರಿತು ಕ್ರಯ ಪತ್ರ ಬರೆದುಕೊಡಲು ಯಾವುದೇ ರೀತಿಯ ಭಾದ್ಯತೆ ಹೊಂದದೇ ಇದ್ದರೂ ಸಹಿತ, ನಾನು ಸುಳ್ಳು ದಾವೆ ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ**.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಅದೆ.

RAJASHEKHAR
Digitally signed by RAJASHEKHAR
Date: 2026.01.17 18:32:40 +0530

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಮ್.ಎಫ್.ಸಿ. ಜಮಖಂಡಿ.